ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

379 (553) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಗ್ರಾಮೀಣ ರಸ್ತೆಗಳ ಅಭಿವೃದ್ಧಿ, ರಸ್ತೆಗಳ ಅಗಲೀಕರಣ ಸೇರಿದಂತೆ ಸರ್ಕಾರಕ್ಕೆ ಸಂಬಂಧಿಸಿದ ಇತರೆ ಕಾಮಗಾರಿಗಳನ್ನು ನಡೆಸುವ ಸಂಬಂಧ ವಿವಿಧ ಇಲಾಖೆಗಳಿಗೆ ಮರಗಳ ತೆರವಿಗಾಗಿ ಅರಣ್ಯ ಇಲಾಖೆ ವಿಧಿಸುವ ಮೊತ್ತ ಎಷ್ಟು ; ಈ ಸಂಬಂಧ ಕಳೆದ 2 ವರ್ಷಗಳಿಂದ ಈವರೆವಿಗೆ ಎಷ್ಟು ಹಣ ಜಮಾ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಅರಣ್ಯ ಇಲಾಖೆ ಸರ್ಕಾರಿ ಅಭಿವೃದ್ಧಿ ಕಾಮಗಾರಿಗಳ ಸಂಬಂಧ ಜಮಾ ಮಾಡಿರುವ ಹಣವನ್ನು ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗುತ್ತಿದೆ ; (ಕಾರ್ಯಕ್ರಮಗಳ ಸಂಪೂರ್ಣ ವಿವರ ನೀಡುವುದು)

(ಇ) ರಸ್ತೆಗಳ ಅಗಲೀಕರಣ ಕಾಮಗಾರಿಗಳು ಮುಗಿದ ನಂತರ ರಸ್ತೆ ಬದಿಯಲ್ಲಿ ಮರಗಳನ್ನು ಬೆಳೆಸಲು ಯಾವ ಕ್ರಮ ಕೈಗೊಳ್ಳಲಾಗಿದೆ; ಈವರೆಗೆ ಎಷ್ಟು ಮರಗಳನ್ನು ಬೆಳಸಲಾಗಿದೆ ; ಇದಕ್ಕೆ ವಿನಿಯೋಗಿಸಿದ ಮೊತ್ತವೆಷ್ಟು ; ಮಂಡ್ಯ ಜಿಲ್ಲೆಯ ಸಂಪೂರ್ಣ ಮಾಹಿತಿ ನೀಡುವುದು ?